ರುಚಿಕರವಾದ ಉಪಹಾರ
ಸಿಹಿ – ಖಾರ ತಿಂಡಿಗಳು
ನ್ಯೂ ಕೋರ್ಟ್ ರೆಸ್ಟೋರೆಂಟ್
ಹೊಸ ಬಸ್‌ಸ್ಟ್ಯಾಂಡ್ ಬಳಿ
ಕುಂದಾಪುರ
ಫೋ : 232878

www.kundaprabha.com e-mail : kundaprabha@gmail.com

# ಕುಂದಪ್ರಭ

ವಾರಪತ್ರಿಕೆ

ಸ್ಥಾಪನೆ : 1948
6 ದಶಕಗಳ ವಿಶ್ವಾಸನೀಯ ಸೇವೆಯಲ್ಲಿ
ಶೇಟ್ ಜ್ಯುವೆಲ್ಲರ್ಸ್
ಶಂಕರ್ ಶೇಟ್ ಬಿಲ್ಡಿಂಗ್
ಮುಖ್ಯರಸ್ತೆ, ಕುಂದಾಪುರ
ಫೋನ್ : 230242

॥ ಸಂಪುಟ : 28 ॥ ಸಂಚಿಕೆ : 03॥ UDP/1263/2018-20 || R.NO.50495/91 ॥ ತಾರೀಕು : 06–02–2018 ॥ ರೂ 5/– ॥ ವಾರ್ಷಿಕ ಚಂದಾ : 300/– ಅಂಚೆಯಲ್ಲಿ : 400/

## ಭಂಡಾರ್‌ಕಾರ್ಸ್ ಕಾಲೇಜಿಗೆ 5 ರ್‍ಯಾಂಕ್



ಶಾಂಭವಿ
ಬಿ.ಎಸ್ಸಿ –3ನೇ ರ್‍ಯಾಂಕ್



ಸಂಧ್ಯಾ
ಬಿ.ಸಿ.ಎ.–5ನೇ ರ್‍ಯಾಂಕ್



ಯು.ಸಂಗೀತಾ ಶೆಣೈ
ಬಿ.ಎಸ್ಸಿ –8ನೇ ರ್‍ಯಾಂಕ್



ರಜನಿ
ಬಿ.ಎ.–9ನೇ ರ್‍ಯಾಂಕ್



ಕಾರ್ತಿಕ್ ಎನ್.ಕಾಮತ್
ಬಿ.ಸಿ.ಎ.– 10ನೇ ರ್‍ಯಾಂಕ್

ಮಂಗಳೂರು ವಿಶ್ವವಿದ್ಯಾಲಯವು ಕಳೆದ 2017ರ ಎಪ್ರಿಲ್ ಹಾಗೂ ಮೇ ತಿಂಗಳಿನಲ್ಲಿ ನಡೆಸಿದ ಪದವಿ ಪರೀಕ್ಷೆಯಲ್ಲಿ ಕುಂದಾಪುರದ ಭಂಡಾರ್ಕಾರ್ಸ್ ಕಾಲೇಜಿಗೆ 5 ರ್‍ಯಾಂಕ್ ಬಂದಿವೆ.

ಬಿ.ಎಸ್ಸಿ ಪದವಿ ವಿಭಾಗದಲ್ಲಿ ಕಾಲೇಜಿನ ವಿದ್ಯಾರ್ಥಿ ಅಂಚೆ ಇಲಾಖೆ ಉದ್ಯೋಗಿಗಳಾಗಿರುವ ಉಪ್ಪುಂದದ ಶಿವಾನಂದ ಭಟ್ ಮತ್ತು ಶಾರದಾ ಭಟ್ ದಂಪತಿಯ ಪುತ್ರಿ ಶಾಂಭವಿ ಮೂರನೇ ರ್‍ಯಾಂಕ್ ಪಡೆದಿದ್ದಾರೆ. ಕುಂದಾಪುರದ ಕುಂದಪ್ರಭ ಪತ್ರಿಕೆಯ ಸಂಪಾದಕರಾದ ಯು.ಎಸ್. ಶೆಣೈ ಮತ್ತು ಸಾಧನಾ ಶೆಣೈ ದಂಪತಿಯ ಪುತ್ರಿ ಯು.ಸಂಗೀತಾ ಶೆಣೈ ಎಂಟನೇ ರ್‍ಯಾಂಕ್ ಪಡೆದಿದ್ದಾರೆ.

ಬಿ.ಸಿ.ಎ. ಪದವಿ ವಿಭಾಗದಲ್ಲಿ ಹೊಸಾಡು ಗ್ರಾಮದ ಗುಜ್ಜಾಡಿಯ ರಾಮ ಪೂಜಾರಿ ಮತ್ತು ರುಕ್ಮಿಣಿ ದಂಪತಿಯ ಪುತ್ರಿ ಸಂಧ್ಯಾ ಐದನೇ ರ್‍ಯಾಂಕ್ ಪಡೆದಿದ್ದಾರೆ. ಮಣಿಪಾಲದ ನಾಗೇಂದ್ರ ಕಾಮತ್ ಅವರ ಪುತ್ರ ಕಾರ್ತಿಕ್ ಎನ್.ಕಾಮತ್ ಹತ್ತನೇ ರ್‍ಯಾಂಕ್ ಪಡೆದಿದ್ದಾರೆ.

ಬಿ.ಎ. ಪದವಿ ವಿಭಾಗದಲ್ಲಿ ಕುಂದಾಪುರದ ಟಿ.ಬಿ. ನಗರದ ಶಂಕರ್ ಮತ್ತು ಜಾನಕಿಯವರ ಪುತ್ರಿ ರಜನಿ ಒಂಭತ್ತನೇ ರ್‍ಯಾಂಕ್ ಪಡೆದಿದ್ದಾರೆ.

ಕಾಲೇಜಿನ ಆಡಳಿತ ಮಂಡಳಿ, ವಿಶ್ವಸ್ಥರು ಪ್ರಾಂಶುಪಾಲರು, ಶಿಕ್ಷಕ ಮತ್ತು ಶಿಕ್ಷಕೇತರ ಸಿಬ್ಬಂದಿ ಮತ್ತು ವಿದ್ಯಾರ್ಥಿಗಳು ಅಭಿನಂದನೆಗಳನ್ನು ತಿಳಿಸಿದ್ದಾರೆ ಎಂದು ಕಾಲೇಜಿನ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಶಾಸಕ ಸ್ಥಾನಕ್ಕೆ ಹಾಲಾಡಿ ಶ್ರೀನಿವಾಸ ಶೆಟ್ಟಿ ರಾಜಿನಾಮೆ : ಬಿಜೆಪಿ ಸೇರ್ಪಡೆ

ಶಾಸಕ ಸ್ಥಾನಕ್ಕೆ ರಾಜಿನಾಮೆ ನೀಡಿದ ಕುಂದಾಪುರದ ಹಾಲಾಡಿ ಶ್ರೀನಿವಾಸ ಶೆಟ್ಟಿ ಶುಕ್ರವಾರ ಬಿಜೆಪಿ ಸೇರಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ಬಿ.ಎಸ್.ಯಡಿಯೂರಪ್ಪ ಹಾಗೂ ಪಕ್ಷದ ರಾಜ್ಯ ಉಸ್ತುವಾರಿ ಮುರುಳೀಧರರಾವ್ ಅವರು ಬಿಜೆಪಿಯ ಧ್ವಜ ಹಸ್ತಾಂತರಿಸುವ ಮೂಲಕ ಹಾಲಾಡಿ ಶ್ರೀನಿವಾಸ ಶೆಟ್ಟಿ ಅವರನ್ನು ಪಕ್ಷಕ್ಕೆ ಬರಮಾಡಿಕೊಂಡರು.

ಕುಂದಾಪುರ ಕ್ಷೇತ್ರದಲ್ಲಿ ನಾಲ್ಕು ಬಾರಿ ಶಾಸಕರಾಗಿರುವ ಹಾಲಾಡಿಯವರು ನಮ್ಮ ನಾಯಕ., ಕಾರಣಾಂತರಗಳಿಂದ ಕೆಲ ದಿನ ದೈಹಿಕವಾಗಿ ಪಕ್ಷದಿಂದ ದೂರವಿದ್ದರೂ ಕ್ಷೇತ್ರದಲ್ಲಿ ಬಿಜೆಪಿ ಬೆಳವಣಿಗೆಗೆ ಶ್ರಮಿಸುತ್ತಿದ್ದರು. ಪಕ್ಷೇತರ ಶಾಸಕರಾಗಿದ್ದರೂ ಬಿಜೆಪಿಯ ಜತೆ ಇದ್ದ ಅವರು ಪ್ರಧಾನಿ ಆಗಮನಕ್ಕೆ ಮುನ್ನ ಪಕ್ಷವನ್ನು ಅಧಿಕೃತವಾಗಿ ಸೇರಿದ್ದಾರೆ. ಉಡುಪಿ ಜಿಲ್ಲೆಯಲ್ಲಿ ಪಕ್ಷಕ್ಕೆ ಆನೆಬಲ ಬಂದಂತಾಗಿದೆ ಎಂದು ಯಡಿಯೂರಪ್ಪ ಹೇಳಿದರು. ತಾನು ಬಿಜೆಪಿಯ ನಿಷ್ಠಾವಂತ ಕಾರ್ಯಕರ್ತ ನಾಗಿರುತ್ತೇನೆ ಎಂದು ಹಾಲಾಡಿ ಶ್ರೀನಿವಾಸ ಶೆಟ್ಟಿ ಹೇಳಿದರು.

